# <u>ಕರ್ನಾಟಕ ವಿಧಾನ ಪರಿಷತ್ತು</u>

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 596 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ |
| ಉತ್ತರಿಸಬೇಕಾದ ದಿನಾಂಕ | 08.12.2023 |
| ಉತ್ತರಿಸುವ ಸಚಿವರು | ಮಾನ್ಯ ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ವಸತಿ ಶಾಲೆಗಳ ಶಿಕ್ಷಕರಿಗೆ ಒಂದು ಹೆಚ್ಚುವರಿ ವೇತನ ಬಡ್ತಿ ನೀಡುವ ಬಗ್ಗೆ ಸರ್ಕಾರದ ನಿಲುವೇನು; | ಸರ್ಕಾರಿ ಪ್ರೌಢ ಶಾಲಾ ಶಿಕ್ಷಕರುಗಳಿಗೆ ಮಂಜೂರಾಗಿರುವ ಒಂದು ಹೆಚ್ಚುವರಿ ವೇತನ ಭತ್ಯೆಯನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ಶಿಕ್ಷಕರಿಗೂ ವಿಸ್ತರಿಸುವ ಕುರಿತಂತೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಹಿಂದಿನ ಸರ್ಕಾರದ ಕಾರ್ಯದರ್ಶಿಗಳಾದ ಶ್ರೀ ಕುಮಾರ್ ನಾಯಕ್, ರವರ ವರದಿಯನ್ವಯ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದು, ಆರ್ಥಿಕ ಇಲಾಖೆಯು ವಸತಿ ಶಾಲೆ ಶಿಕ್ಷಕರುಗಳ ಕರ್ತವ್ಯಗಳು ಮತ್ತು ಶಿಕ್ಷಣ ಇಲಾಖೆಯ ಶಿಕ್ಷಕರುಗಳ ಕರ್ತವ್ಯಗಳನ್ನು ಪರಸ್ಪರ ಹೋಲಿಸಲು ಬರುವುದಿಲ್ಲ. ಎರಡೂ ವೃಂದಗಳ ವೃಂದ ಮತ್ತು ನೇಮಕಾತಿ ನಿಯಮಗಳೂ ಬೇರೆ ಬೇರೆಯಾಗಿದ್ದು, ಒಂದರ ನಿಯಮವನ್ನು ಮತ್ತೊಂದಕ್ಕೆ ಹೋಲಿಸಿ ಅನ್ವಯಿಸಲು ನಿಯಮಗಳಲ್ಲಿ ಅವಕಾಶ ಇಲ್ಲವೆಂದು ಹಿಂಬರಹ ನೀಡಿರುತ್ತದೆ.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ನೌಕರರಿಗೆ ಶ್ರೀ ಕುಮಾರ್ ನಾಯಕ್ ವರದಿಯನ್ವಯ ಒಂದು ಹೆಚ್ಚುವರಿ ವೇತನ ಭತ್ಯೆಯನ್ನು ಮಂಜೂರು ಮಾಡಲು ಶಿಫಾರಸ್ಸು ಮಾಡುವಂತೆ ಕೋರಿ 7ನೇ ವೇತನ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. |
| ಆ) | ಶ್ರೀ ಕುಮಾರ್ ನಾಯಕ್ ರವರ ವರದಿಯ ಪ್ರಕಾರ ಶಿಕ್ಷಣ ಇಲಾಖೆಯ ಶಿಕ್ಷಕರಿಗೆ ದಿನಾಂಕ:01/06/2016 ರಿಂದ ಜಾರಿಗೆ ಬರುವಂತೆ ಒಂದು ಹೆಚ್ಚುವರಿ ವೇತನ ಬಡ್ತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ) | ಸಮಾಜ ಕಲ್ಯಾಣ ಇಲಾಖೆಯ ಅಧೀನದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ಶಿಕ್ಷಕರಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ನೀಡಲು ಇರುವ ತೊಂದರೆಗಳೇನು; ಹಾಗೂ ಆರ್ಥಿಕ ಇಲಾಖೆಯು ತಿರಸ್ಕರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ಯಾವ ಕಾರಣಕ್ಕಾಗಿ ಸಂಪೂರ್ಣ ಮಾಹಿತಿಯನ್ನು ನೀಡುವುದು; | |
| ಈ) | ಶಿಕ್ಷಣ ಇಲಾಖೆಯ ವೇತನ ಶ್ರೇಣಿಯಲ್ಲಿಯೇ ಸೇವೆ ಸಲ್ಲಿಸುತ್ತಿರುವ ವಸತಿ ಶಾಲೆಗಳ ಶಿಕ್ಷಕರಿಗೆ ಒಂದು ಹೆಚ್ಚುವರಿ ವೇತನ ಬಡ್ತಿ ಯಾವ ಕಾಲಮಿತಿಯೊಳಗೆ ನೀಡಲಾಗುವುದು? | |

ಸಕಇ-ಎಂಡಿಎಸ್/220/2023

(ಡಾ.ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು